**ಹೆಚ್ಚುವರಿ ಸಿವಿಲ್ ಜಡ್ಜ ಮತ್ತು ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಭಟ್ಕಳ.**

**ಸಿ. ಸಿ. ನಂಬರಃ 1446/2025**

**ಫಿರ್ಯಾದುದಾರರು** ಸೆಂಟ್ ಮಿಲ್ಲಾಗ್ರಿಸ್ ಕ್ರೆಡಿಟ್ ಸೌಹಾರ್ದ ಸಹಕಾರಿ ಬ್ಯಾಂಕ್ ನಿಯಮಿತ,
ಕಾರವಾರ, ಗಂಗೊಳ್ಳಿ ಶಾಖೆ, ಪ್ರತಿನಿಧಿಸುವವರು,
ಇದರ ಕಿರಿಯ ಸಹಾಯಕರು
ಶ್ರೀ ಪ್ರದೀಪ್ ಸುಭಾಷ್ ಮೊಗೇರ್

**– ವಿರುದ್ಧ –**

**ಆರೋಪಿತರು** ಶ್ರೀಮತಿ ಕಮಲಾ ಮಂಜುನಾಥ ನಾಯ್ಕು ,
ವಯಸ್ಸುಃ 46 ವರ್ಷ
ಸಾಃ 24, ಚಿಕ್ಕಮ್ಮನ ಮನೆ, ವಿ.ಟಿ. ರಸ್ತೆ,
ಭಟ್ಕಳ ತಾಲೂಕು.

**ಆಪಾದನೆ**

ಮಂಜುನಾಥ ನಾಗಪ್ಪ ನಾಯ್ಕು ರವರು ದಿನಾಂಕಃ 29-04-2022 ರಂದು ಪಿರ್ಯಾದಿ ಸೊಸೈಟಿಯಲ್ಲಿ ರೂ.25,000/- (ರೂಪಾಯಿ ಇಪ್ಪತ್ತೈದು ಸಾವಿರ ಮಾತ್ರ) ಹಣವನ್ನು ಸಾಲದ ಖಾತೆ ಸಂಖ್ಯೆಃ BL No. 1408ರಲ್ಲಿ ವ್ಯವಹಾರ ಸಾಲವಾಗಿ ಪಡೆದುಕೊಂಡಿದ್ದು, ಸದ್ರಿ ಸಾಲಕ್ಕೆ ಆರೋಪಿಯಾದ ನೀವು ಜಾಮೀನುದಾರರಾಗಿದ್ದು, ಸದ್ರಿ ಸಾಲದ ಹಣವನ್ನು ವಾರ್ಷಿಕ ಶೇಕಡಾ 15% ವಾರ್ಷಿಕ ಬಡ್ಡಿ ಮತ್ತು 3.75% ದಂಡದ ಬಡ್ಡಿ ದರದಂತೆ ಮರುಪಾವತಿಸುವುದಾಗಿ ಭರವಸೆ ನೀಡಿರುತ್ತೀರಿ. ಆದರೆ ಸದ್ರಿ ಸಾಲದ ಹಣವನ್ನು ಮರುಪಾವತಿ ಮಾಡಲು ವಿಫಲರಾಗಿರುತ್ತೀರಿ. ದಿನಾಂಕಃ 17-05-2025 ರವರೆಗೆ ಸದ್ರಿ ಸಾಲದ ಖಾತೆಯಲ್ಲಿ ರೂ.26,680/- (ರೂಪಾಯಿ ಇಪ್ಪತ್ತಾರು ಸಾವಿರದಾ ಆರು ನೂರಾ ಎಂಬತ್ತು ಮಾತ್ರ) ನಂತರ ಸದ್ರಿ ಸಾಲದ ಹಣವನ್ನು ಮರು ಪಾವತಿಸುವ ಸಲುವಾಗಿ ನೀವು ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ, ಭಟ್ಕಳ ಶಾಖೆಯ ಚೆಕ್ ನಂಬರ್ 720243ನ್ನು ರೂ.26,680/- (ರೂಪಾಯಿ ಇಪ್ಪತ್ತಾರು ಸಾವಿರದಾ ಆರು ನೂರಾ ಎಂಬತ್ತು ಮಾತ್ರ) ಕ್ಕೆ ದಿನಾಂಕಃ 17-05-2025 ಎಂದು ನಮೂದಿಸಿ ಫಿರ್ಯಾದಿದಾರರಿಗೆ ನೀಡಿರುತ್ತೀರಿ, ಸದ್ರಿ ಚೆಕ್ಕನ್ನು ಫಿರ್ಯಾದಿ ಸೊಸೈಟಿಯವರು ದಿ.ಫೆಡರಲ್ ಬ್ಯಾಂಕ್, ಭಟ್ಕಳ ಶಾಖೆಯಲ್ಲಿ ನಗಧೀಕರಣಕ್ಕಾಗಿ ಹಾಜರಪಡಿಸಿದಾಗ,"kindly contact drawer, drawee bank and please present again"ಎಂಬ ಹಿಂಬರಹದೊಂದಿಗೆ ದಿನಾಂಕಃ 20-05-2025 ರಂದು ವಾಪಸ್ಸು ಬಂದಿರುತ್ತದೆ.

ನಂತರ ಫಿರ್ಯಾದಿದಾರರು ದಿನಾಂಕಃ 24-05-2025 ರಂದು ತಮ್ಮ ವಕೀಲರ ಮೂಲಕ ಲೀಗಲ್ ನೋಟಿಸನ್ನು ರಿಜಿಸ್ಟರ್ ಅಂಚೆ ಮುಖಾಂತರ ನಿಮಗೆ ಕಳುಹಿಸಿದ್ದು, ನೋಟಿಸು ಮುಟ್ಟಿದ 15 ದಿವಸದೊಳಗಡೆ ಚೆಕ್ಕನಲ್ಲಿ ನಮೂದಿಸಿದ ಹಣವನ್ನು ನೀಡುವಂತೆ ಸೂಚಿಸಿದ್ದು ಇರುತ್ತದೆ, ಸದ್ರಿ ನೋಟಿಸ್ಸನ್ನು ನೀವು ದಿನಾಂಕಃ 29-05-2025 ರಂದು ಸ್ವೀಕರಿಸಿರುತ್ತೀರಿ. ಆದರೆ ಇಂದಿನವರೆಗೂ ಸಹ ನೀವು ಚೆಕ್ಕಿನ ಹಣವನ್ನು ಪಾವತಿ ಮಾಡದೆ ಆ ಮೂಲಕ ನೆಗೋಶಿಯೆಬಲ್ ಇನ್ಸ್ಟ್ರುಮೆಂಟ ಆಕ್ಟ ಕಲಂ 138 ರಡಿಯಲ್ಲಿ ಶಿಕ್ಷಾರ್ಹವಾದ ಅಪರಾಧವೆಸಗಿದ್ದೀರಿ ಎಂದು ಅದು ನನ್ನ ಸಂಜ್ಞೆಯಲ್ಲಿ ಬರುತ್ತದೆ.

ಪ್ರಶ್ನೆ – ನಿಮ್ಮ ಮೇಲೆ ಹೊರಿಸಲಾದ ಆಪಾದನೆ ಕೇಳಿದ್ದೀರಾ? ಅದು ನಿಮಗೆ ತಿಳಿಯಿತೇ?

ಉತ್ತರ – ಹೌದು.

ಪ್ರಶ್ನೆ – ನೀವು ಸದ್ರಿ ಆಪಾದನೆಯನ್ನು ಒಪ್ಪಿಕೊಳ್ಳುತ್ತೀರಾ? ಅಥವಾ ನಿಮ್ಮ ವಿರುದ್ಧ ವಿಚಾರಣೆ ನಡೆಯಬೇಕೇ?

ಉತ್ತರ – ಇಲ್ಲ, ವಿಚಾರಣೆಯಾಗಬೇಕು.

(ಮೇಲಿನ ಆಪಾದನೆಯನ್ನು ಆಪಾದಿತನಿಗೆ ತಿಳಿದಿರುವ ಭಾಷೆಯಲ್ಲಿ ಓದಿ, ತಿಳಿಸಿ ಹೇಳಿ ಅವರು ನೀಡಿದ ಉತ್ತರವನ್ನು ಯಥಾರೀತಿ ಬರೆದುಕೊಂಡಿರುವುದಾಗಿ ಈ ಮೂಲಕ ದೃಢೀಕರಿಸಲಾಗಿದೆ.)

**ಸಹಿ ಇದೆ./-**

**(ಶ್ರೀಮತಿ.ಧನವತಿ)**

ಹೆಚ್ಚುವರಿ ಸಿವಿಲ್ ಜಡ್ಜ ಮತ್ತು

ದಿನಾಂಕಃ 14-11-2025. ನ್ಯಾಯಿಕ ದಂಡಾಧಿಕಾರಿ, ಭಟ್ಕಳ.